909(571) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿ ಹೂಲಿಕಟ್ಟೆ, ಇನಾಮಹೊಂಗಲ, ಕರೀಕಟ್ಟೆ ಮತ್ತು ಬಡ್ಲಿ ಕಾತ್ರಾಳ ಗ್ರಾಮಗಳಲ್ಲಿ 33 ಕೆ ವಿ ವಿದ್ಯುತ್ ಉಪ ಕೇಂದ್ರಗಳನ್ನು ನಿರ್ಮಾಣದ ಪ್ರಸ್ತಾವನೆ ಸಲ್ಲಿಸಿರುವುದು ನಿಜವಲ್ಲವೆ,

ಆ) ಈ ಪ್ರಸ್ತಾವನೆಯನ್ನು ಮಂಜೂರು ಮಾಡುವಲ್ಲಿ ಸರ್ಕಾರದ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು, ನಿಜ

ಆ) ದಿನಾಂಕ 5–12–2006ರಂದು ಜರುಗಿದ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಮಿತಿಯ ಸಭೆಯಲ್ಲಿ, ಸವದತ್ತಿ ತಾಲ್ಲೂಕಿನ ಹೂಲಿಕಟ್ಟೆ, ಇನಾಂಹೊಂಗಲ, ಕರಿಕಟ್ಟೆ ಮತ್ತು ಬಡ್ಲಿ–ಕಾತ್ರಾಳಗಳಲ್ಲಿ 33 ಕೆ ವಿ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿರುತ್ತದೆ ಈ ಮೇಲಿನ ಸ್ಥಳಗಳಲ್ಲಿ ವಿದ್ಯುತ್ ಕೇಂದ್ರ ಸ್ಥಾಪಿಸಲು ಅಗತ್ಯವಾದ ಜಮೀನುಗಳನ್ನು ಗುರುತಿಸಲಾಗುತ್ತಿದೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡುವ ಸಲುವಾಗಿ, ಕಾಮಗಾರಿಗಳ ವಿವರವಾದ ಯೋಜನಾ ವರದಿಗಳನ್ನು ಸಿದ್ಧಪಡಿಸಲಾಗುತ್ತಿದೆ

910(572) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ, ಸವದತ್ತಿ–ಧಾರವಾಡ ರಸ್ತೆಯನ್ನು ಕೆಶಿಪ್ ಯೋಜನೆಯಡಿ ತೆಗೆದುಕೊಂಡು ಪೂರ್ಣ ಅಭಿವೃದ್ಧಿಗೊಳಿಸಲು ಸಲ್ಲಿಸಿರುವ ಪ್ರಸ್ತಾವನೆ ಮಂಜೂರಾಗಿದೆಯೇ,

ಆ) ಹಾಗಿದ್ದಲ್ಲಿ, ಕೆಲಸ ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)